**ಕರ್ನಾಟಕ ಸರ್ಕಾರ**
**ವಾಣಿಜ್ಯ ತೆರಿಗೆ ಇಲಾಖೆ**

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡವಳಿಗಳು**

ವಿಷಯ: 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿ 'ವಿವಿಧ ಅಳತೆಯ ಅಡಲ್ಟ್ ಡೈಯಾಪರ್‌ಗಳ' ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ಡೊವೆಲ್ ಸರ್ಜಿಕಲ್ಸ್ (ಪ್ರೈ) ಲಿಮಿಟೆಡ್, ಬೆಂಗಳೂರು, ಇವರ ದಿನಾಂಕ: 17-10-2013 ಅರ್ಜಿ,(ಟಿನ್: 29900842641)

**

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮಡಿಯಲ್ಲಿ ನೋಂದಣಿದಾರರಾದ ಮೆ: ಡೊವೆಲ್ ಸರ್ಜಿಕಲ್ಸ್ (ಪ್ರೈ) ಲಿಮಿಟೆಡ್, ನಂ.31 ಮತ್ತು 32, 9ನೇ ಮುಖ್ಯರಸ್ತೆ, 20ನೇ ಅಡ್ಡ ರಸ್ತೆ, ಎನ್.ಆರ್. ಬಡಾವಣೆ, ವಿರಾಟ ನಗರ, ಬೊಮ್ಮನಹಳ್ಳಿ, ಬೆಂಗಳೂರು – 560068 ಇವರು ಮೇಲ್ಕಂಡ ಅರ್ಜಿಯಲ್ಲಿ 'ವಿವಿಧ ಅಳತೆಯ ಅಡಲ್ಟ್ ಡೈಯಾಪರ್‌ಗಳ' ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಮೇರೆಗೆ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರು ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**<u>ಸ್ಪಷ್ಟೀಕರಣ ಆದೇಶ ಸಂಖ್ಯೆ:ಸಿಎಲ್‌ಆರ್/ಸಿಆರ್-100/13-14, ದಿ. 18-12-2013</u>**

'ವಿವಿಧ ಅಳತೆಯ ಅಡಲ್ಟ್ ಡೈಯಾಪರ್‌ಗಳು' 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 4(1)(ಬಿ)(iii) ರಂತೆ ದಿನಾಂಕ:01.08.2012ರಿಂದ ಶೇಕಡಾ 14.5ರಷ್ಟು ತೆರಿಗೆಗೊಳಪಡುತ್ತದೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ.

(ಅಜಯ್ ಸೇಠ್)
ವಾಣಿಜ್ಯ ತೆರಿಗೆಗಳ ಆಯುಕ್ತರು,
(ಕರ್ನಾಟಕ), ಬೆಂಗಳೂರು

ವಾಣಿಜ್ಯ ತೆರಿಗೆಗಳ ಆಯುಕ್ತರು
(ಕರ್ನಾಟಕ), ಬೆಂಗಳೂರು